**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕ : 03.06.2025**

**ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಸಾಕ್ಷಿಯನ್ನು ಪುನಃ ಕರೆಯಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು.**

**ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದಃ**

1. ನಿಪಿ.16 ಮತ್ತು 18 ನಿಮ್ಮ ಗಂಡನ ತಂದೆ ಹೆಸರಿನಲ್ಲಿದೆ ಎಂದರೆ ಸರಿ. ನಿಮ್ಮ ಮಾವನವರು ಮೊದಲು ನಡೆಸುತ್ತಿದ್ದ ವ್ಯವಹಾರವನ್ನು ಈಗಲೂ ನಡೆಸಿಕೊಂಡು ಬರುತ್ತಿರುವುದರಿಂದ ನಿಮಗೆ ಯಾವುದೇ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ. ನಿಮ್ಮ ಗಂಡ ಯಾವುದೇ ಕೆಲಸ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ನಿಪಿ.17 ಮೃತ ಲೋಕೇಶ್ ರವರಿಗೆ ಸಂಬಂಧಪಟ್ಟ ದಾಖಲೆಗಳು ಅಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಸ್ವತಃ ನನ್ನ ಗಂಡ ಬದುಕಿದ್ದಾಗ ಗಿರವಿ ಅಂಗಡಿಯನ್ನು ನನ್ನ ಗಂಡನೇ ನೋಡಿಕೊಳ್ಳುತ್ತಿದ್ದರು ಎಂದು ಹೇಳುತ್ತಾರೆ. ನಿಮ್ಮ ಗಂಡ ಆದಾಯ ತೆರಿಗೆ ಇಲಾಖೆಗೆ ಐ ಟಿ ಆರ್ ಪಾವತಿಸಿಲ್ಲ ಎಂದರೆ ಸರಿ. ಸಾಕ್ಷಿ ಸ್ವತಃ ಗಿರವಿ ಅಂಗಡಿಯನ್ನು ಅವರೆ ನೋಡಿಕೊಳ್ಳುತ್ತಿದ್ದರು ಎಂದು ಹೇಳುತ್ತಾರೆ. ನಿಮ್ಮ ಯಜಮಾನನಿಗೆ ನೀವು ಹೇಳಿರುವಂತೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗೊಳಿಸಲಾಯಿತು.**

**ಓ ಹೇ ಕೇ ಸ ಇ ಒ**

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಪಾಂಡವಪುರ.**